# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1359(1567)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ರಾಜ್ಯದಲ್ಲಿ ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಕುರಿತು

(ಅ) ರಾಜ್ಯದಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಎಷ್ಟು ಪ್ರಕರಣಗಳು ಕಂಡುಬಂದಿವೆ; (ಪ್ರಕರಣವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಏನಾದರು ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಿದ್ದಲ್ಲಿ, ಪ್ರಕರಣವಾರು ಮಾಹಿತಿ ನೀಡುವುದು;

(ಇ) ಶಿಷ್ಟಾಚಾರ ಪಾಲನೆ ಮಾಡುವ ಸಂಬಂಧ ಹಾಲಿ ಜಾರಿಯಲ್ಲಿರುವ ಕಾನೂನು/ಆದೇಶಗಳನ್ನು ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಶಿಷ್ಟಾಚಾರ ಪಾಲನೆ ಮಾಡಲು ಇನ್ನಷ್ಟು ಪರಿಣಾಮಕಾರಿ ಕಾನೂನು ರೂಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಕೈಗೊಳ್ಳುವುದು? (ಮಾಹಿತಿ ನೀಡುವುದು)